# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ    Kannada Daily

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.01 | Issue. 130 | Pages. 2 | Date: 23-03-2025, SUNDAY    RNI NO: KARKAN/2024/89601

ಸಂಪುಟ : 01 - ಸಂಚಿಕೆ : 130 - ಪುಟಗಳು : 2 - 23 ಮಾರ್ಚ್ 2025 ಭಾನುವಾರ    Ph: 8762954248    ದರ : ₹1


## ಪ್ರತ್ಯೇಕ ಪ್ರಕರಣ: ನಾಲ್ವರು ಜಲ ಸಮಾಧಿ

### ಕರಾಳ ಶನಿವಾರ | ಮುಗಿಲು ಮುಟ್ಟಿದ ಕುಟುಂಬಸ್ಥರ ಆಕ್ರಂದನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಅರಕಲಗೂಡು ಹಾಗೂ ಸಕಲೇಶಪುರ ತಾಲ್ಲೂಕಿನಲ್ಲಿ ಸಂಭವಿಸಿದ ಪ್ರತ್ಯೇಕ ಪ್ರಕರಣಗಳಲ್ಲಿ ನಾಲ್ವರು ಜಲ ಸಮಾಧಿಯಾಗಿದ್ದಾರೆ.

ಬಿಸಿಲಿನ ಝಳಕ್ಕೆ ಬಸವಳಿದಿದ್ದ ಯುವಕರಿಬ್ಬರು ಸ್ನಾನಕ್ಕಾಗಿ ಹೇಮಾವತಿ ನದಿಗೆ ಇಳಿದು ವಾಪಸ್ ಬರಲು ಸಾಧ್ಯವಾಗದೆ ಮೃತಪಟ್ಟಿದ್ದಾರೆ. ಸಕಲೇಶಪುರ ತಾಲ್ಲೂಕಿನ ಹೆನ್ನಲಿ ಗ್ರಾಮದ ಘಟನೆ ನಡೆದಿದೆ. ತಾಲ್ಲೂಕಿನ ಕಾಟಳ್ಳಿ ಗ್ರಾಮದ ಪ್ರಕಾಶ್ (29), ಚಿಕ್ಕಮಗಳೂರು ಜಿಲ್ಲೆ ಹಾಂದಿ ಗ್ರಾಮದ ಭರತ್ (27) ಮೃತರು. ಶನಿವಾರ ಮಧ್ಯಾಹ್ನ 2 ಗಂಟೆಗೆ ಕುಟುಂಬದ ಏಳು ಜನರು ಹೇಮಾವತಿ ನದಿ ತೀರಕ್ಕೆ ಬಂದಿದ್ದರು. ಎತ್ತಿನಹೊಳೆ ಯೋಜನೆ ಪೈಪ್‌ಲೈನ್ ಹಾದು ಹೋಗಿರುವ ಸ್ಥಳದ ಸಮೀಪ ನೀರಿನಲ್ಲಿ ಈ ಇಬ್ಬರೂ ಸ್ನೇಹಿತರು ಈಜಲು ತೆರಳಿದ್ದರು. ಈ ವೇಳೆ ಸರಿಯಾಗಿ ಈಜು ಬಾರದ ಕಾರಣ, ನದಿಯಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ಸಿಬ್ಬಂದಿ ಸ್ಥಳೀಯರ ನೆರವಿನಿಂದ ಮೃತದೇಹ ಹೊರ ತೆಗೆದರು.

ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಮೃತದೇಹಗಳನ್ನು ಮರಣೋತ್ತರ ವೈದ್ಯಕೀಯ ಪರೀಕ್ಷೆಗಾಗಿ ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ರವಾನಿಸಲಾಗಿದೆ.









### ಕೆರೆಯಲ್ಲಿ ಮುಳುಗಿ ಇಬ್ಬರು ಸಾವು

ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣ ಹೋಬಳಿ ಮಣಜೂರು ಗ್ರಾಮದ ಇಬ್ಬರು ರೈತರು ಜಾನುವಾರುಗಳಿಗೆ ನೀರು ಕುಡಿಸುವ ವೇಳೆ ಕಾಲುಜಾರಿ ಕೆರೆಯಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ಗ್ರಾಮದ ಲಕ್ಷ್ಮಣ್ (46) ಮತ್ತು ರವಿ (40) ಮೃತ ರೈತರು. ಕೃಷಿ ಜಮೀನಿನಲ್ಲಿ ಜಾನುವಾರುಗಳನ್ನು ಮೇಯಿಸಿ ಕೆರೆಯಲ್ಲಿ ಜಾನುವಾರುಗಳಿಗೆ ನೀರು ಕುಡಿಸುವ ವೇಳೆ ಆಕಸ್ಮಿಕವಾಗಿ ಕಾಲು ಜಾರಿ ಲಕ್ಷ್ಮಣ್ ಎಂಬ ರೈತ ನೀರಿನಲ್ಲಿ ಮುಳುಗಿದ್ದಾರೆ.

ಹತ್ತಿರದಲ್ಲಿಯೇ ಇದ್ದ ರವಿ ಎಂಬುವವರು ಲಕ್ಷ್ಮಣ್‌ರನ್ನು ರಕ್ಷಿಸಲು ನೀರಿಗೆ ಇಳಿದಿದ್ದಾರೆ. ಇಬ್ಬರು ಕೂಡ ಕ್ಷಣಾರ್ಧದಲ್ಲಿ ಮುಳುಗಿದ್ದಾರೆ.

ಕೃಷಿ ಜಮೀನಿನಲ್ಲಿ ಕೆಲಸ ಮಾಡುತಿದ್ದ ಲಕ್ಷ್ಮಣ್ ಪತ್ನಿ ಸರೋಜ ಅವರು ಕೆರೆ ಕಡೆಗೆ ಬಂದಾಗ ಜೋರಾಗಿ ಕೂಗಿದ್ದಾರೆ. ತಕ್ಷಣವೇ ಅಕ್ಕಪಕ್ಕದ ಜಮೀನಿನವರು ಧಾವಿಸಿ ಬಂದು ಹುಡುಕಾಟ ನಡೆಸಿದ್ದಾರೆ. ವಿಷಯ ತಿಳಿದು ಅರಕಲಗೂಡು ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ದೌಡಾಯಿಸಿದರು. ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ಮೂಲಕ ರವಿ ಅವರ ಮೃತದೇಹವನ್ನು ಹೊರ ತೆಗೆದರು. ಕತ್ತಲಾದ ಹಿನ್ನಲೆಯಲ್ಲಿ ಲಕ್ಷ್ಮಣ್ ಅವರ ಶವ ಶೋಧಿಸುವ ಕಾರ್ಯಾಚರಣೆಯನ್ನು ಭಾನುವಾರಕ್ಕೆ ಮುಂದೂಡಲಾಯಿತು.

## ಜಿಲ್ಲೆಯ ವಿವಿಧೆಡೆ ವರುಣನ ಅಬ್ಬರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಬೇಲೂರು, ಹೊಳೆನರಸೀಪುರ ಸೇರಿ ಹಲವೆಡೆ ಶನಿವಾರ ವರುಣನ ಅಬ್ಬರಕ್ಕೆ ಸಾಕ್ಷಿಯಾಯಿತು. ಆಲಿಕಲ್ಲು, ಮಿಂಚು, ಗುಡುಗು, ಸಿಡಿಲು ಸಹಿತ ಧಾರಾಕಾರ ಮಳೆ ಸುರಿದಿದ್ದು, ಜನಜೀವನದ ಮೇಲೆ ಪರಿಣಾಮ ಬೀರಿದೆ.

ರಸ್ತೆಗಳು ಆಲಿಕಲ್ಲುಮಯವಾಗಿ, ಮಳೆಯ ನೀರು ಹರಿಯುತ್ತಿರುವ ದೃಶ್ಯಗಳು ಕಂಡುಬಂದಿವೆ.

ವಿಶೇಷವಾಗಿ ಹೊಳೆನರಸೀಪುರ ತಾಲ್ಲೂಕಿನಲ್ಲಿ ಮಳೆ ಆರ್ಭಟ ಹೆಚ್ಚಿದೆ. ಹಳ್ಳಿಮೈಸೂರು, ದೊಡ್ಡಹಳ್ಳಿ, ದೊಡ್ಡಕಾಡನೂರು, ಚಿಕ್ಕ ಕಾಡನೂರು, ದಾಳಗೌಡನಹಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ ವರ್ಷಧಾರೆಯಾಗಿ ಸುರಿದಿದೆ. ರಸ್ತೆಗಳಲ್ಲಿ ಭಾರಿ ಪ್ರಮಾಣದ ಮಳೆಯ ನೀರು ಹರಿದು, ಕೆಲವೆಡೆ ಸಂಚಾರಕ್ಕೆ ಅಡೆತಡೆಯುಂಟಾಗಿದೆ.

ಒಂದೆಡೆ ಮಳೆಯಿಂದ ತೊಂದರೆಯಾದರೂ, ರೈತರ ಮೊಗದಲ್ಲಿ ಮಂದಹಾಸ ಮೂಡಿದೆ. ಬಿಸಿಲ ಬೇಗೆಗೆ ಬೆಂದಿದ್ದ ಭೂಮಿಗೆ ವರುಣನ ಆಗಮನ ತಂಪೆರೆದಿದ್ದು, ಬೆಳೆಗಳಿಗೆ ಜೀವದಾನ ಸಿಕ್ಕಂತಾಗಿದೆ.

ಜಿಲ್ಲೆಯಲ್ಲಿ ಮುಂದಿನ ಕೆಲವು ದಿನಗಳ ಕಾಲ ಮಳೆ ಮುಂದುವರಿಯುವ ಸಾಧ್ಯತೆ ಇದೆ.



## ಕಾರು ಡಿಕ್ಕಿ: ಇಬ್ಬರು ಸಾವು

ಅರಸೀಕೆರೆ: ತಾಲ್ಲೂಕಿನ ದುಮ್ಮೇನಹಳ್ಳಿ ರಸ್ತೆಯಲ್ಲಿ ಶುಕ್ರವಾರ ಟಿವಿಎಸ್ ಬೈಕ್‌ಗೆ ಕಾರು ಡಿಕ್ಕಿಯಾಗಿ ಬೈಕ್‌ನಲ್ಲಿದ್ದ ಇಬ್ಬರು ಮೃತಪಟ್ಟಿದ್ದಾರೆ.

ತಿಪಟೂರು ತಾಲ್ಲೂಕು ಚಿಕ್ಕಹೊನ್ನೇನಹಳ್ಳಿ ಗ್ರಾಮದ ಗುರುಸಿದ್ಧಪ್ಪ ಹಾಗೂ ಚಿಕ್ಕವನಹಳ್ಳಿಯ ರಾಜಣ್ಣ ಮೃತರು. ಅರಸೀಕೆರೆ ತಾಲ್ಲೂಕು ಜ್ಯೋತಿಮಲ್ಲಾಪುರ ಗ್ರಾಮಕ್ಕೆ ಬಂದಿದ್ದ ಅವರು ಊರಿಗೆ ವಾಪಾಸ್ಸಾಗುತ್ತಿದ್ದಾಗ ಹೊನ್ನವಳ್ಳಿ ಕಡೆಯಿಂದ ಬಂದ ಮಾರುತಿ ಆಲ್ಟೊ ಕಾರು ಡಿಕ್ಕಿಯಾಗಿದೆ. ಬೈಕ್ ಮೇಲಿಂದ ಬಿದ್ದು ಗಂಭೀರ ಗಾಯಗೊಂಡ ಗುರುಸಿದ್ಧಪ್ಪ ಸ್ಥಳದಲ್ಲೇ ಮೃತಪಟ್ಟರೆ ರಾಜಣ್ಣ ಅವರು ಚಿಕಿತ್ಸೆ ಫಲಿಸದೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜು. 3 ರಿಂದ ವಿಶ್ವ ಒಕ್ಕಲಿಗರ ಸಮ್ಮೇಳನ: ಸಿದ್ಧತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಅಮೆರಿಕದ ಸ್ಯಾನ್‌ಜೋಸ್ ನಗರದಲ್ಲಿ ಜು. 3 ರಿಂದ 5ರ ವರೆಗೆ ವಿಶ್ವ ಒಕ್ಕಲಿಗರ ಸಮ್ಮೇಳನ ಹಮ್ಮಿಕೊಂಡಿದ್ದು ಭರದ ಸಿದ್ಧತೆ ನಡೆಯುತ್ತಿದೆ.

ಅಮೆರಿಕ ಒಕ್ಕಲಿಗರ ಪರಿಷತ್ತಿನ ಪಶ್ಚಿಮ ಶಾಖೆಯ (VPA-West) ಆಶ್ರಯದಲ್ಲಿ ಸುಂದರ ನಗರ ಸ್ಯಾನ್ ಹೋಸೆ ಮೆಕೆನ್ರಿ ಕೇಂದ್ರದಲ್ಲಿ ಸಮ್ಮೇಳನ ಜರುಗಲಿದೆ. ಸಮ್ಮೇಳನದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಭಾಗವಹಿಸಲಿದ್ದಾರೆ. ಜಗತ್ತಿನಾದ್ಯಂತ ವಿಸ್ತರಿಸಿರುವ ಒಕ್ಕಲಿಗ ಸಮುದಾಯವನ್ನು ಒಂದುಗೂಡಿಸುವ,

ಸಂಸ್ಕೃತಿ ಪರಂಪರೆ ಸಾರುವ, ಉದ್ಯಮ ಅವಕಾಶ ವಿಸ್ತರಣೆ ಉದ್ದೇಶ ಹೊಂದಿರುವ ಸಮ್ಮೇಳನದಲ್ಲಿ, ಸಮುದಾಯದ ಹಿರಿಯ ಸ್ವಾಮೀಜಿಗಳು, ಉದ್ಯಮಿಗಳು, ಕೇಂದ್ರ ಹಾಗು ರಾಜ್ಯದ ಸಚಿವರು, ರಾಜಕಾರಣಿಗಳು ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಸುಮಾರು 1,200ಕ್ಕೂ ಜನರು ಸಮಾಗಮವಾಗಲಿದ್ದಾರೆ. ಭಾರತ ಮತ್ತು ಅಮೆರಿಕ ದೇಶಗಳಷ್ಟೇ ಅಲ್ಲದೆ, ಯುರೋಪ್, ಆಸ್ಟ್ರೇಲಿಯಾ, ಕೆನಡಾ, ದುಬೈ ಹಾಗು ಇತರೆಡೆ ಇರುವ ಒಕ್ಕಲಿಗರು ಸಮ್ಮೇಳನದಲ್ಲಿ ಒಂದುಗೂಡುವುದು ವಿಶೇಷ.

ಸಾಂಸ್ಕೃತಿಕ ಉತ್ಸವಕ್ಕೆ ಭಾರತ ಹಾಗೂ ಅಮೆರಿಕದ ಕಲಾವಿದರಿಂದ ಭರ್ಜರಿ ಮನೋರಂಜನಾ ಕಾರ್ಯಕ್ರಮ, ಸವಿಯಾದ ಸಾಂಪ್ರದಾಯಿಕ ಔತಣ, ಬಾಂಧವ್ಯದ ಬೆಸುಗೆ ಬಲಪಡಿಸುವ ಸ್ನೇಹಕೂಟ, ಸಂಸ್ಕೃತಿ-ಸಂಪ್ರದಾಯ ಎತ್ತಿ ತೋರಿಸುವ ಭವ್ಯ ಮೆರವಣಿಗೆ, ಮಕ್ಕಳಿಗೆ ಹಾಗು ಯುವ ಜನಾಂಗಕ್ಕೆ ಸ್ಫೂರ್ತಿ-ಸಂತೋಷ ನೀಡುವ ಅನೇಕ ಚಟುವಟಿಕೆಗಳು,

ಉದ್ಯಮಶೀಲರಿಗೆ ಉತ್ತೇಜನ ನೀಡುವ ಬ್ಯುಸಿನೆಸ್ ಫೋರಂ, ಸ್ತ್ರೀ ಶಕ್ತಿಗೆ ಪೂರಕವಾದ ಮಹಿಳಾ ವೇದಿಕೆ ಹೀಗೆ ಹತ್ತು ಹಲವಾರು ವಿಭಿನ್ನ ಕಾರ್ಯಕ್ರಮಗಳ ಯೋಜನೆ ಭರದಿಂದ ಸಾಗಿದೆ.

ಅದ್ಭುತ ತಾಣ, ಅಮೋಘ ಆತಿಥ್ಯ, ಅಪೂರ್ವ ಕಾರ್ಯಕ್ರಮಗಳ ಜೊತೆಗೆ ಎಲ್ಲೆಡೆಯಿಂದ ಬರುವ ತಮ್ಮ ಬಂಧು-ಮಿತ್ರರಿಗೆ ಸ್ವಾಗತ ಕೋರಲು ಕ್ಯಾಲಿಫೋರ್ನಿಯಾ ಒಕ್ಕಲಿಗರು ಉತ್ಸಾಹದಿಂದ ಕಾಯುತ್ತಿದ್ದಾರೆ.

ಅಮೆರಿಕ ಹಾಗೂ ಜಗತ್ತಿನಾದ್ಯಂತ ಇರುವ ಒಕ್ಕಲಿಗ ಸಮುದಾಯದ ಎಲ್ಲಾ ಸದಸ್ಯರು ಸಮ್ಮೇಳನದಲ್ಲಿ ಪಾಲ್ಗೊಳ್ಳಲು ಆಯೋಜಕರ ಸಮಿತಿ ಆತ್ಮೀಯವಾಗಿ ಆಹ್ವಾನಿಸಿದೆ.

ಸಮ್ಮೇಳನದಲ್ಲಿ ಭಾಗವಹಿಸಲಿಚ್ಛಿಸುವವರು ವಿವರಗಳಿಗೆ https://myvpa.org/2025 ಇಲ್ಲಿಗೆ ಅಥವಾ ಮಂಜುನಾಥ್ (9980765001) ಅವರನ್ನು ಸಂಪರ್ಕಿಸಲು ತಿಳಿಸಿದೆ.

## ವಿದ್ಯುತ್ ಆಘಾತ : ಕಾರ್ಮಿಕನಿಗೆ ಗಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ತಾಲ್ಲೂಕಿನ ಹೊಂಕರವಹಳ್ಳಿ ಸಮೀಪದ ಕಾಫಿ ತೋಟದಲ್ಲಿ ಶನಿವಾರ ಕಾಳು ಮೆಣಸು ಕೊಯ್ಯುವಾಗ ವಿದ್ಯುತ್ ಸ್ಪರ್ಶವಾಗಿ ವ್ಯಕ್ತಿ ಗಂಭೀರ ಗಾಯಗೊಂಡಿದ್ದಾರೆ.

ಅಸ್ಸಾಂ ಮೂಲದ ಕೂಲಿ ಕಾರ್ಮಿಕ ಇಸ್ಮಾಯಿಲ್ (44) ಗಾಯಾಳು, ಕಾಳು ಮೆಣಸು ಬಿಡಿಸಲು ಅಲ್ಯುಮಿನಿಯಂ ಏಣಿಯ ಸಹಾಯದಿಂದ ಮರ ಹತ್ತುವ ವೇಳೆ ಮೇಲೆ ಹಾದು ಹೋಗಿದ್ದ ವಿದ್ಯುತ್ ತಂತಿಗೆ ಏಣಿ ಸ್ಪರ್ಶವಾಗಿದೆ. ಕಾರ್ಮಿಕ ಏಣಿಯ ಮೇಲೆ ಕಾಲು ಇರಿಸುತ್ತಿದ್ದಂತೆ ವಿದ್ಯುತ್ ಸ್ಪರ್ಶವಾಗಿ ಬಲಗಾಲಿಗೆ ತೀವ್ರ ಗಾಯಗೊಂಡು ಸ್ಥಳದಲ್ಲೇ ಕುಸಿದು ಬಿದ್ದಿದ್ದಾನೆ. ತಕ್ಷಣವೇ ಸಹಕಾರ್ಮಿಕರು ನೆರವಿಗೆ ಧಾವಿಸಿ ತುರ್ತು ಚಿಕಿತ್ಸಾ ವಾಹನದ ಮೂಲಕ ಹಾಸನದ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆಲೂರು ಸೆಸ್ಕ್ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಪ್ರತಿಭಟನೆಗಷ್ಟೇ ಸೀಮಿತವಾದ ಬಂದ್

### ಎಂದಿನಂತೆ ಬಸ್, ವಾಹನಗಳ ಸಂಚಾರ | ಜಿಲ್ಲಾದ್ಯಂತ ಬಿಗಿ ಬಂದೋಬಸ್ತ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬೆಳಗಾವಿಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ನಿರ್ವಾಹಕ ಮಹದೇವಪ್ಪ ಹುಕ್ಕೇರಿ ಮೇಲೆ ಹಲ್ಲೆ ಹಾಗೂ ಎಂಇಎಸ್‌ನ ದಬ್ಬಾಳಿಕೆ ಖಂಡಿಸಿ ಶನಿವಾರ ಕನ್ನಡಪರ ಸಂಘಟನೆಗಳು ಕರೆ ಕೊಟ್ಟಿದ್ದ ಕರ್ನಾಟಕ ಬಂದ್ ಜಿಲ್ಲೆಯಲ್ಲಿ ಪ್ರತಿಭಟನೆಗಷ್ಟೇ ಸೀಮಿತವಾಯಿತು.



ಹಾಸನ ನಗರ ಸೇರಿ ತಾಲ್ಲೂಕು ಕೇಂದ್ರಗಳಲ್ಲಿ ಕನ್ನಡ ಪರ ಸಂಘಟನೆಗಳು ಪ್ರತಿಭಟನೆ ನಡೆಸಿದವು. ಜನಜೀವನ ಎಂದಿನಂತೆ ಸಹಜವಾಗಿತ್ತು. ವಾಹನಗಳ ಸಂಚಾರ, ಅಂಗಡಿ ಮುಂಗಟ್ಟು, ತರಕಾರಿ, ಹೂ, ಹಣ್ಣು ವ್ಯಾಪಾರ, ಹೋಟೆಲ್‌ಗಳು ಕಾರ್ಯ ನಿರ್ವಹಿಸಿದವು. ಸರ್ಕಾರಿ ರಜಾ ಇದ್ದರಿಂದ ಸಾರ್ವಜನಿಕ ಸಂಚಾರ ಎಂದಿನಂತೆ ವಿರಳವಾಗಿತ್ತು.

ಜಿಲ್ಲಾದ್ಯಂತ ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಚಾರ, ಆಟೋ, ಟ್ಯಾಕ್ಸಿಗಳ ಓಡಾಟ, ಶಾಲಾ-ಕಾಲೇಜುಗಳು, ಮಾರುಕಟ್ಟೆ, ಸಾರ್ವಜನಿಕರ ಸಂಚಾರ, ವ್ಯಾಪಾರ-ವಹಿವಾಟಿನಲ್ಲಿ ಯಾವುದೇ ವ್ಯತ್ಯಾಸಗಳು ಕಂಡುಬರಲಿಲ್ಲ.

ಬಂದ್‌ಗೆ ಕನ್ನಡ ಪರ ಪ್ರಮುಖ ಸಂಘಟನೆಗಳಾದ ಕರ್ನಾಟಕ ರಕ್ಷಣಾ ವೇದಿಕೆ ಬಣಗಳು ಹಾಗೂ ಇತರೆ ಸಂಘಟನೆಗಳ ಬೆಂಬಲ ದೊರಕದ ಕಾರಣ ಹೆಚ್ಚಿನ ಪರಿಣಾಮ ಬೀರಲಿಲ್ಲ. ಮಾರುಕಟ್ಟೆಯಲ್ಲಿ ವ್ಯಾಪಾರ ವಹಿವಾಟು ಸಹಜವಾಗಿಯೇ ಇದ್ದು, ಅಂಗಡಿ ಮುಂಗಟ್ಟುಗಳು ಯಥಾಸ್ಥಿತಿಯಲ್ಲಿ ತೆರೆದಿದ್ದವು. ವ್ಯಾಪಾರಿಗಳು ತಮ್ಮ ದೈನಂದಿನ ಕಾರ್ಯ ಚಟುವಟಿಕೆಯನ್ನು ಯಾವುದೇ ಆತಂಕವಿಲ್ಲದೆ ನಿರ್ವಹಿಸಿದರು. ಜಿಲ್ಲೆಯಲ್ಲಿ ಬಂದ್‌ಗೆ ಸಾರ್ವಜನಿಕರಿಂದಲೂ ಯಾವುದೇ ಬೆಂಬಲ ದೊರಕಲಿಲ್ಲ.

ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಬಾಳ್ಳುಗೋಪಾಲ್ ನೇತೃತ್ವದಲ್ಲಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು. ಬಂದ್ ನಡೆಸುವ ಸಲುವಾಗಿ ಜಿಲ್ಲೆಯಲ್ಲಿ ಯಾವುದೇ ರೀತಿಯ ಪೂರ್ವಭಾವಿ ಸಭೆಯಾಗಲಿ,

ಬೆಂಬಲ ನೀಡುವ ಬಗ್ಗೆ ಸಂಘಟನೆಗಳು ಹೇಳಿಕೆ ನೀಡದೆ ಇದ್ದರಿಂದ ಬಂದ್‌ಗೆ ಯಾವುದೇ ರೀತಿಯ ಸ್ಪಂದನೆ ದೊರೆಯಲಿಲ್ಲ.

ಅರಸೀಕೆರೆ ವರದಿ: ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ಕನ್ನಡಪರ ಸಂಘಟನೆಗಳು ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ನಗರದಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು.

ದಿನಗಳಂತೆಯೇ ಅಂಗಡಿ ಮುಂಗಟ್ಟು ತೆರೆದಿದ್ದವು. ವ್ಯಾಪಾರ ವಹಿವಾಟು ಎಂದಿನಂತೆ ನಡೆಯಿತು. ಆದರೂ ಮುಂಜಾಗ್ರತಾ ಕ್ರಮವಾಗಿ ಡಿವೈಎಸ್‌ಪಿ ಲೋಕೇಶ್ ಅವರ ಮಾರ್ಗದರ್ಶನದಲ್ಲಿ ನಗರ ಠಾಣೆ ಸರ್ಕಲ್ ಇನ್‌ಸ್ಪೆಕ್ಟರ್ ರಾಘವೇಂದ್ರ, ಸಬ್ ಇನ್‌ಸ್ಪೆಕ್ಟರ್ ದಿಲೀಪ್,

ರಾಜ್ಯ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣ, ರೈಲು ನಿಲ್ದಾಣ ಸೇರಿ ನಗರದ ಆಯಕಟ್ಟಿನ ಪ್ರದೇಶಗಳಲ್ಲಿ ಪೊಲೀಸ್ ಸಿಬ್ಬಂದಿ ನಿಯೋಜಿಸುವ ಮೂಲಕ ಬಂದ್ ಹೆಸರಿನಲ್ಲಿ ಯಾವುದೇ ರೀತಿಯ ಅಹಿತಕರ ಘಟನೆ ಸಂಭವಿಸದಂತೆ ಬಂದೋಬಸ್ತ್ ಮಾಡಲಾಗಿತ್ತು.

ಡಿವೈಎಸ್‌ಪಿ ಲೋಕೇಶ್, ನಮ್ಮ ಪೊಲೀಸ್ ಸಿಬ್ಬಂದಿ ಜೊತೆಗೆ ಒಂದು ಕೆಎಸ್‌ಆರ್‌ಪಿ ತುಕಡಿ ಹಾಗೂ ಹೋಂ ಗಾರ್ಡ್ ಸಿಬ್ಬಂದಿ ಬಳಸಿಕೊಂಡು ಬಂದೋಬಸ್ತ್ ಮಾಡಲಾಗಿದೆ. ನಿಯಮ ಮೀರಿ ಯಾರಾದರೂ ನಡೆದುಕೊಂಡರೆ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕರವೇ ತಾಲ್ಲೂಕು ಅಧ್ಯಕ್ಷ ಹೇಮಂತ್ ಕುಮಾರ್ ಮಾತನಾಡಿ, ನಾಡು, ನುಡಿ, ನೆಲ, ಜಲದ ರಕ್ಷಣೆಗೆ ಹಾಗೂ ಕನ್ನಡಿಗರ ಮೇಲೆ ನಡೆಯುವ ದೌರ್ಜನ್ಯ ಖಂಡಿಸಲು ಹೋರಾಟ ಅನಿವಾರ್ಯ. ಆದರೆ ಬಂದ್ ಮಾಡುವುದೇ ಮೊದಲ ಆದ್ಯತೆ ಅಲ್ಲ. ನಮ್ಮ ರಾಜ್ಯಾಧ್ಯಕ್ಷರು ಬಂದ್‌ಗೆ ಬೆಂಬಲ ನೀಡದ ಹಿನ್ನೆಲೆ ನಾವೂ ಇಂದಿನ ಬಂದ್‌ಗೆ ಬೆಂಬಲ ನೀಡಿಲ್ಲ ಎಂದು ತಿಳಿಸಿದರು.

ಸಕಲೇಶಪುರದಲ್ಲಿ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಯಿತು. ಪ್ರಮುಖ ಸಂಘಟನೆಗಳಾದ ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣ ಗೌಡ ಬಣ), ಕರವೇ (ಪ್ರವೀಣ್ ಶೆಟ್ಟಿ) ಬಣ ಹಾಗೂ ಮಲೆನಾಡು ರಕ್ಷಣಾ ಸೇನೆ ಸೇರಿದಂತೆ ಯಾವ ಸಂಘಟನೆಗಳು ಕೂಡ ಬಂದ್‌ಗೆ ಬೆಂಬಲ ನೀಡದ ಹಿನ್ನೆಲೆ ತಾಲ್ಲೂಕಿನಲ್ಲಿ ಕರ್ನಾಟಕ ಬಂದ್‌ಗೆ ಬೆಂಬಲ ಸಿಕ್ಕಿಲ್ಲ.

ಪಟ್ಟಣ ಹಾಗೂ ಗ್ರಾಮೀಣ ಭಾಗದ ಪ್ರಮುಖ ಪ್ರದೇಶಗಳಲ್ಲಿ ಬಸ್, ಆಟೋ ಸಂಚಾರ ಸಾರ್ವಜನಿಕರ ಓಡಾಟ ಎಂದಿನಂತೆಯೇ ಇದೆ. ಮಂಗಳೂರು, ದಕ್ಷಿಣ ಕನ್ನಡ, ಉಡುಪಿ, ಹಾಸನ, ಬೆಂಗಳೂರು, ಮೈಸೂರು ಜಿಲ್ಲೆಗಳಿಗೆ ಎಂದಿನಂತೆ ಬಸ್, ಆಟೋ ಸಂಚಾರ ಮತ್ತು ಶಾಲಾ ಕಾಲೇಜುಗಳು ಪ್ರಾರಂಭವಾಗಿವೆ. ಮಾರುಕಟ್ಟೆಯಲ್ಲಿ ಎಂದಿನಂತೆ ವ್ಯಾಪಾರ ವಹಿವಾಟು ನಡೆಯಿತು.

## 10 ಕೋಟಿ ರೂ. ಮೌಲ್ಯದ ಭೂಮಿ ವಶ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲ್ಲೂಕಿನ ಹಾನಬಾಳು ಹೋಬಳಿಯ ಕಾಡುಮನೆ ಗ್ರಾಮ ವ್ಯಾಪ್ತಿಯಲ್ಲಿನ 22.03 ಎಕರೆ ಅರಣ್ಯ ಭೂಮಿ ಒತ್ತುವರಿಯನ್ನು ತೆರವುಗೊಳಿಸಿರುವ ಅರಣ್ಯ ಇಲಾಖೆ ಸುಮಾರು 10 ಕೋಟಿ ರೂ. ಮೌಲ್ಯದ ಭೂಮಿ ವಶಕ್ಕೆ ಪಡೆದಿದೆ.

ಕಾಡುಮನೆ ಗ್ರಾಮದ ಸರ್ವೆ ನಂ. 76ರ ಮೂರ್ಕಣ್ಣು ಗುಡ್ಡದ ಸೆಕ್ಷನ್ 4ರ ಅರಣ್ಯ ಪ್ರದೇಶದಲ್ಲಿ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಲಾಗಿದ್ದ ಪ್ರಕರಣ ಬೆಳಕಿಗೆ ಬಂದಿತ್ತು. ಮನೋಹರ್ ಅಯ್ಯರ್ ಎಂಬುವವರು ಈ ಭೂಮಿಯನ್ನು ಅಕ್ರಮವಾಗಿ ಬಳಸುತ್ತಿದ್ದ ಹಿನ್ನೆಲೆಯಲ್ಲಿ, ಸಕಲೇಶಪುರ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಅರಣ್ಯ ಕಾಯ್ದೆ ಸೆಕ್ಷನ್ 64 ಅಡಿಯಲ್ಲಿ ಒತ್ತುವರಿ ತೆರವಿಗೆ ನಿರ್ಧಾರ ಕೈಗೊಂಡಿದ್ದರು. ಅದರಂತೆ ಇಂದು ಅಧಿಕಾರಿಗಳು ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ತೆರಳಿ ಒತ್ತುವರಿಗೊಳಿಸಿದರು.

ಹಾಸನ ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಮಾರ್ಗದರ್ಶನದಲ್ಲಿ ಸಕಲೇಶಪುರ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿ ಹೇಮಂತ್ ನೇತೃತ್ವದಲ್ಲಿ ಈ ತೆರವು ಕಾರ್ಯಾಚರಣೆ ನಡೆಸಲಾಯಿತು.

## ಇಂದು ಸಂತೆಕಾಳೇಶ್ವರಿ ದೇಗುಲ ಲೋಕಾರ್ಪಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಬಾಗೂರು ಹೋಬಳಿ ಕೇಂದ್ರದಲ್ಲಿ ಸಂತೆಕಾಳೇಶ್ವರಿ ದೇವಾಲಯ ಲೋಕಾರ್ಪಣೆ ಸಮಾರಂಭ ಮಾ. 23ರ ಭಾನುವಾರ ನೆರವೇರಲಿದೆ.

ಬೆಳಿಗ್ಗೆ ಸ್ಥಿರ ಬಿಂಬ, ಪ್ರಾಣ ಪ್ರತಿಷ್ಠಾಪನೆ, ಪ್ರತಿಷ್ಠಾಪನಾ ಹೋಮ, ದುರ್ಗಾಹೋಮ, ಶ್ರೀ ಸೂಕ್ತ, ಮತಿದಾಸೂಕ್ತ ಹೋಮ ಬಳಿಕ ದೇವಿಗೆ ಮಹಾಮಂಗಳಾರತಿ ನೆರವೇರಲಿದೆ. ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ, ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ, ಮುಜರಾಯಿ ಸಚಿವ ರಾಮಲಿಂಗರೆಡ್ಡಿ, ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ,



ಸಂಸದ ಶ್ರೇಯಸ್ ಪಟೇಲ್, ಶಾಸಕರಾದ ಸಿ.ಎನ್. ಬಾಲಕೃಷ್ಣ, ಹೆಚ್.ಡಿ. ರೇವಣ್ಣ ಪಾಲ್ಗೊಳ್ಳಲಿದ್ದಾರೆ.

ಆರು ಕೋಟಿ ರೂ. ವೆಚ್ಚದಲ್ಲಿ ಸಂತೆಕಾಳೇಶ್ವರಿ ಹಾಗೂ ಚಿಕ್ಕಮ್ಮ ದೇವಿ ಅಮ್ಮನವರ ದೇವಾಲಯ ನಿರ್ಮಿಸಲಾಗಿದೆ. ಶುಕ್ರವಾರದಿಂದಲೇ ಧಾರ್ಮಿಕ ಕೈಂಕರ್ಯ ಆರಂಭವಾಗಿವೆ. ಶನಿವಾರ ಬೆಳಿಗ್ಗೆ ಕಳಶ ಸ್ಥಾಪನೆ ಮಾಡಿ, ಪಂಚಗವ್ಯ ಸಹಿತ ಬಿಂಬಶುದ್ಧಿ ನೆರವೇರಿಸಲಾಯಿತು. ಗ್ರಾಮದ ವೇಣುಗೋಪಾಲ, ಆಂಜನೇಯಸ್ವಾಮಿ, ಶನಿದೇವರು, ಬಸವಣ್ಣ, ರುದ್ರೇಶ್ವರ, ಲಕ್ಷ್ಮೀದೇವಿ, ಗಣಪತಿ ದೇವಾಲಯಗಳಲ್ಲಿಯೂ ವಿಶೇಷ ಪೂಜೆ ನೆರವೇರಿದವು. ಗ್ರಾಮ ಕಲ್ಯಾಣಿಯನ್ನು ಸ್ವಚ್ಛಗೊಳಿಸಿ ಗಂಗಾ ಪೂಜೆ ನೆರವೇರಿಸಲಾಯಿತು. ದೇವಾಲಯ ಲೋಕಾರ್ಪಣೆ ಪ್ರಯುಕ್ತ ನಡೆದ ವಿವಿಧ ಹೋಮದಲ್ಲಿ ದೇವಾಲಯ ಆಡಳಿತ ಮಂಡಳಿ ಸಮಿತಿ ಪದಾಧಿಕಾರಿಗಳು ಕುಟುಂಬ ಸಮೇತರಾಗಿ ಪಾಲ್ಗೊಂಡಿದ್ದರು. ಸಂತಕಾಳೇಶ್ವರಿ ತವರು ಗ್ರಾಮವಾದ ಮರುವನಹಳ್ಳಿಯಿಂದ ಬೆಳ್ಳಿ ರಥದಲ್ಲಿ ಮೂರ್ತಿ ತರಲಾಯಿತು. ಗ್ರಾಮದ ಪ್ರತಿ ಮನೆಯ ಮುಂದೆ ರಂಗೋಲಿ ಬಿಡಿಸಿ ಸಿಂಗರಿಸಲಾಗಿದೆ. ಪ್ರಮುಖ ಬೀದಿ, ರಸ್ತೆಗಳನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿದೆ. ಧಾರ್ಮಿಕ ಕಾರ್ಯಕ್ರಮದಲ್ಲಿ ಮರುವನಹಳ್ಳಿ, ಬ್ಯಾಡಹಳ್ಳಿ, ಮಡಬ, ಕೃಷ್ಣಾಪುರ, ಕೂರದಹಳ್ಳಿ, ಕುರುವಂಕ, ಗೊಲ್ಲರಹೊಸಹಳ್ಳಿ, ಕುಂಬಾರಹಳ್ಳಿ, ಗೋವಿನಕೆರೆ, ತಿಪ್ಪೂರು, ಕಾಳೇನಹಳ್ಳಿ, ದ್ಯಾವನೂರು, ಬನವಾಸೆ, ದಡ್ಡಿಹಳ್ಳಿ, ಹೊನ್ನೇನಹಳ್ಳಿ, ಅರೇಹಳ್ಳಿ, ಬೇಲೂರು, ದಾಸಾಪುರ ಸೇರಿ ವಿವಿಧ ಗ್ರಾಮಸ್ಥರು ಪಾಲ್ಗೊಂಡರು.

ಸಂತೆಕಾಳೇಶ್ವರಿ ದೇವಸ್ಥಾನ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಬಾಗೂರು ಮಂಜೇಗೌಡ, ಉಪಾಧ್ಯಕ್ಷ ಬಿ.ಎಚ್. ಶಿವಣ್ಣ, ಕಾರ್ಯದರ್ಶಿ ದಕ್ಷಿಣಮೂರ್ತಿ, ಗುಡಿಗೌಡ ತಿಮ್ಮೇಗೌಡ, ಮುಖಂಡ ಕೃಷ್ಣೇಗೌಡ ಹಾಗೂ ಇತರರಿದ್ದರು.

## ಲಾಂಗ್ ಹಿಡಿದು ಹೋಟೆಲ್ ಸಿಬ್ಬಂದಿ ಅಟ್ಟಾಡಿಸಿದ ಲೇಡಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹೊಸ ಬಸ್ ನಿಲ್ದಾಣದಲ್ಲಿ ಮಹಿಳೆಯೊಬ್ಬರು ಲಾಂಗ್‌ನಿಂದ ವ್ಯಕ್ತಿಯೊಬ್ಬನನ್ನು ಅಟ್ಟಾಡಿಸಿದ ಘಟನೆ ಶುಕ್ರವಾರ ರಾತ್ರಿ ನಡೆದಿದೆ.


ದಂಪತಿ ಬಸ್ ನಿಲ್ದಾಣದ ಹೋಟೆಲ್‌ನಲ್ಲಿ ಕೆಲಸ ಮಾಡಿಕೊಂಡಿದ್ದರು ಎನ್ನಲಾಗಿದೆ. ಹೋಟೆಲ್ ಸಿಬ್ಬಂದಿಯೊಬ್ಬ ಅನುಚಿತವಾಗಿ ವರ್ತಿಸಿದ್ದರಿಂದ ಮಹಿಳೆ ಲಾಂಗ್ ಹಿಡಿದು ಆತನ ಮೇಲೆ ಹಲ್ಲೆ ನಡೆಸಲು ಬಂದರೆ ಆಕೆಯ ಪತಿ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ನೌಕರರನ್ನು ಹಿಡಿಯಲು ಓಡಾಡಿದ್ದಾನೆ. ಸಿಬ್ಬಂದಿ ದಂಪತಿ ಕೈಗೆ ಸಿಗದೆ ಓಡಿದ್ದರಿಂದ ಬಚಾವಾಗಿದ್ದಾನೆ.

ಬಸ್‌ಗಾಗಿ ಕಾಯುತ್ತಿದ್ದ ಸಾರ್ವಜನಿಕರು ಮಹಿಳೆ ಕೈಯಲ್ಲಿ ಲಾಂಗ್ ಹಿಡಿದು ಬಂದಿದ್ದನ್ನು ಮೊಬೈಲ್ ಕ್ಯಾಮರಾದಲ್ಲಿ ಸೆರೆ ಹಿಡಿದಿದ್ದಾರೆ.

# ಬಿಸಿಲಾಘಾತಕ್ಕೆ ಬಸವಳಿದ ಜನತೆ

## 38 ಡಿಗ್ರಿ ಸೆಲ್ಸಿಯಸ್ ತಾಪಮಾನ । ತಂಪು ಪಾನೀಯಕ್ಕೆ ಹೆಚ್ಚಿದ ಬೇಡಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮಲೆನಾಡು, ಅರೆಮಲೆನಾಡು, ಬಯಲು ಸೀಮೆ ಹೀಗೆ ವಿಭಿನ್ನ ಹವಾಗುಣ ಹೊಂದಿರುವ ಜಿಲ್ಲೆಯಲ್ಲಿ ರಣ ಬಿಸಿಲು ಜನರ ನೆತ್ತಿ ಸುಡುತ್ತಿದೆ. ಜಿಲ್ಲೆಯಲ್ಲಿ ಶುಕ್ರವಾರ 38.1 ಡಿಗ್ರಿ ಸೆಲ್ಸಿಯಸ್‌ಗಿಂತ ಹೆಚ್ಚಿನ ತಾಪಮಾನ ದಾಖಲಾಗುವ ಮೂಲಕ ಬಿಸಿಲಾಘಾತ ನೀಡಿದೆ.

ನಗರ ಸೇರಿ ಜಿಲ್ಲೆಯ ಬಹುತೇಕ ಕಡೆ ಫೆಬ್ರವರಿ ಅಂತ್ಯದಿಂದಲೇ ತಾಪಮಾನ ನಿಧಾನ ಗತಿಯಲ್ಲಿ ಏರುತ್ತಲೇ ಇದೆ. ಇದುವರೆಗೂ ಹೆಚ್ಚೆಂದರೆ 32, 34, 35 ಡಿಗ್ರಿ ಸೆಲ್ಸಿಯಸ್‌ನಷ್ಟು ತಾಪಮಾನ ಕಂಡುಬರುತ್ತಿತ್ತು. ಶನಿವಾರ ಬೆಳಿಗ್ಗೆಯಿಂದಲೇ ತಾಪಮಾನ ಗರಿಷ್ಠ ಮಟ್ಟಕ್ಕೆ ತುಲುಪಿದೆ. ಅರಸೀಕೆರೆ ತಾಲ್ಲೂಕಿನ ಗಂಡಸಿ, ಜಾವಗಲ್ ಭಾಗದಲ್ಲಿ 38.1 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಮಾರ್ಚ್ ತಿಂಗಳಲ್ಲೇ ಹೀಗಾದರೆ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಏನು ಗತಿ. ಇನ್ನ್ಯಾವ ಪರಿ ಬಿಸಿಲು ಸುಡಬಹುದು ಎಂಬ ಆತಂಕ ಮನೆ ಮಾಡಿದೆ. ಕಳೆದ ಮುಂಗಾರು ಉತ್ತಮವಾಗಿತ್ತು ಮತ್ತು ದೀರ್ಘ ಕಾಲದ ಮಳೆಯಾಗಿತ್ತು. ಮುಂಗಾರಿನ ಬಳಿಕವೂ ಕೆಲವು ಚಂಡಮಾರುತ, ವಾಯುಭಾರ ಕುಸಿತಗಳ ಪರಿಣಾಮ ಡಿಸೆಂಬರ್ ತಿಂಗಳವರೆಗೂ ಆಗೊಮ್ಮೆ ಈಗೊಮ್ಮೆ ಮಳೆಯಾಗುತ್ತಲೇ ಇತ್ತು. ಆದರೆ ಡಿಸೆಂಬರ್ ತಿಂಗಳಲ್ಲಿ ಸೆಂಗಾಲ್ ಚಂಡಮಾರುತದ ಬಳಿಕ ಜಿಲ್ಲೆಯಲ್ಲಿ ಮಳೆ ಸುರಿದಿಲ್ಲ. ಮಾ12ರಂದು ಕೊಂಚ ಪ್ರಮಾಣದಲ್ಲಿ ಮಳೆಯಾದರೂ ಯಾವುದೇ ರೀತಿಯಲ್ಲೂ ಪ್ರಯೋಜನವಾಗಿಲ್ಲ, ಬಿಸಿಲು ಇನ್ನಷ್ಟು ಹೆಚ್ಚಾಗಿದೆ. ಹೀಗಾಗಿ ಭೂಮಿಯಲ್ಲಿ ತೇವಾಂಶ ಕಡಿಮೆಯಾಗುತ್ತಿದ್ದು, ಹೆಚ್ಚಿನ ಬಿಸಿ ಕಂಡುಬರುತ್ತಿದೆ. ಜೊತೆಗೆ ಹವಾಮಾನ ವೈಪರೀತ್ಯದ ಪರಿಣಾಮದಿಂದಲೂ ಹೆಚ್ಚಿನ ಬಿಸಿಲು ಕಾಣಿಸಿಕೊಳ್ಳುತ್ತಿದ್ದು, ತಾಪಮಾನ ಏರಿಕೆಗೆ ಕಾರಣವಾಗುತ್ತಿದೆ ಎಂಬುದು ಹವಾಮಾನ ಇಲಾಖೆ ತಜ್ಞರ ಅಭಿಪ್ರಾಯವಾಗಿದೆ.

ಈ ಬಾರಿ ಪೂರ್ವ ಮುಂಗಾರು ಮುಂಚಿತವಾಗಿ ಆರಂಭವಾಗುವ ಸಾಧ್ಯತೆಯಿದ್ದು, ಮಾರ್ಚ್ ತಿಂಗಳಲ್ಲಿ ಒಂದೆರಡು ಮಳೆಯಾದರೆ ತಾಪಮಾನ ಕಡಿಮೆಯಾಗಲು ಸಹಕಾರಿಯಾಗಲಿದೆ. ಆದರೆ ಸದ್ಯಕ್ಕೆ ಮಳೆಯಾಗುವ ಯಾವುದೇ ಮುನ್ಸೂಚನೆ ಇಲ್ಲ.

ಹೀಗಾಗಿ ಮುಂದಿನ ದಿನಗಳಲ್ಲಿ ಭೂಮಿಯಲ್ಲಿನ ತೇವಾಂಶ ಮತ್ತಷ್ಟು ಕಡಿಮೆಯಾಗಿ ತಾಪಮಾನ ಮತ್ತಷ್ಟು ಏರಿಕೆಯಾಗಬಹುದು ಎಂದು ಅಂದಾಜಿಸಲಾಗುತ್ತಿದೆ. ಜಿಲ್ಲೆಯ ಮಟ್ಟಿಗೆ 38 ಡಿಗ್ರಿಗಿಂತಲೂ ಹೆಚ್ಚಿನ ತಾಪಮಾನ ಅಪಾಯಕಾರಿಯಾಗಿದ್ದು, ಜನರು ತಮ್ಮ ಆರೋಗ್ಯ ಜೊತೆಗ ಬೆಳೆಗಳ ರಕ್ಷಣೆಗೆ ಮುಂಜಾಗ್ರತಾ ಕ್ರಮ ಅನುಸರಿಸಬೇಕಿದೆ.

ಉಷ್ಣಾಂಶ ಹೆಚ್ಚಾಗಿರುವುದರಿಂದ ಆರೋಗ್ಯದ ಮೇಲೂ ಪರಿಣಾಮ ಬೀರುತ್ತಿದೆ. ಶಾಖದ ಹೊಡೆತದಿಂದಾಗಿ (ಹಿಟ್ ವೇವ್) ಚರ್ಮದ ಸಮಸ್ಯೆ, ದೇಹದ ನಿರ್ಜಲೀಕರಣ ಸೇರಿ ವಿವಿಧ ಸಮಸ್ಯೆಗಳು ಎದುರಾಗುತ್ತಿವೆ. ತಾಪ ಹೆಚ್ಚುತ್ತಿರುವ ಹಿನ್ನಲೆ ಮಕ್ಕಳಲ್ಲಿ ಅತಿಸಾರದಂತಹ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ. ಹಿರಿಯರಿಗೂ ತಾಪಮಾನ ಹೆಚ್ಚಳದಿಂದ ತೊಂದರೆಯಾಗಬಹುದು. ಹೀಗಾಗಿ ಕೆಲವು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದು ಉತ್ತಮ ಎಂಬುದು ಆರೋಗ್ಯ ತಜ್ಞರ ಸಲಹೆಯಾಗಿದೆ.

### ಬಿಸಿಲ ಝಳಕ್ಕೆ ಜನರು ಹೈರಾಣ

ರಣ ಬಿಸಿಲಿನ ಹೊಡೆತಕ್ಕೆ ಜನರು ಹೈರಾಣಾಗಿದ್ದಾರೆ. ಬಿರು ಬಿಸಿಲಿನಲ್ಲಿ ಹೊರಕ್ಕೆ ಬರುವುದೆಂದರೆ ಒಂದು ರೀತಿಯಲ್ಲಿ ಬಾಣಲಿಯಲ್ಲಿ ಬಂದು ಬಿದ್ದಂತಾಗುತ್ತಿದೆ. ಹಗಲು ಬಿಸಿಲಿನ ಹೊಡೆತವಾದರೆ, ರಾತ್ರಿ ವಿಪರೀತ ಸೆಕೆಯ ಹಿಂಸೆ. ಬಿಸಿಲಿನಿಂದಾಗಿ ಜಿಲ್ಲೆಯಲ್ಲಿ ತಾಪಮಾನ ಏರಿಕೆಯಾಗುತ್ತಲೇ ಇದೆ. ಉತ್ತರ ಕರ್ನಾಟಕದಲ್ಲಿ ಸಾಮಾನ್ಯ ಎನಿಸುವ ಬಿಸಿಲ ಬೇಗೆ ಇದೀಗ ಹಾಸನದಲ್ಲೂ ಶುರುವಾಗಿದೆ. ಬೆಳಿಗ್ಗೆ 8 ಗಂಟೆಯಿಂದಲೇ ಶುರುವಾಗುವ ಬಿಸಿಲ ಬೇಗೆಗೆ ಹೊರಗೆ ಕಾಲಿಡಲು ಸಾಧ್ಯವಾಗದ ಸ್ಥಿತಿ ಇದೆ. ಜನ ಬಿಸಿ ತಣಿಸಿಕೊಳ್ಳಲು ಎಳನೀರು, ತಂಪು ಪಾನೀಯಗಳ ಮೊರೆ ಹೋಗಿದ್ದಾರೆ. ಸುಡು ಬಿಸಿಲಿನಿಂದಾಗಿ ನಮ್ಮ ಬದುಕು ಸಹ ಬೆಂದು ಹೋಗಿದೆ. ತುತ್ತು ಅನ್ನಕ್ಕಾಗಿ ದಿನವಿಡೀ ಬಿಸಿಲಲ್ಲೇ ನಿಂತು ವ್ಯಾಪಾರ ಮಾಡಬೇಕಾದ ಅನಿವಾರ್ಯತೆ ನಮ್ಮದು. ಛತ್ರಿ ಅಥವಾ ಪ್ಲಾಸ್ಟಿಕ್ ಮುಚ್ಚಿಕೊಂಡರೂ ಬಿಸಿಲ ಹೊಡೆತ ತಪ್ಪಿಸಿಕೊಳ್ಳುತ್ತಿಲ್ಲ. ಇದರಿಂದಾಗಿ, ಮಧ್ಯಾಹ್ನ ವ್ಯಾಪಾರ ನಿಲ್ಲಿಸಿ ಬೆಳಿಗ್ಗೆ ಮತ್ತು ಸಂಜೆ ಮಾತ್ರ ಅಂಗಡಿ ಹಾಕುತ್ತಿದ್ದೇವೆ ಎಂದು ಬೀದಿ ವ್ಯಾಪಾರಿಗಳು ಹೇಳಿಕೊಂಡಿದ್ದಾರೆ.

## ಮಹಿಳೆಯರು ಆರೋಗ್ಯಕ್ಕೆ ಆದ್ಯತೆ ನೀಡಬೇಕು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹೆಣ್ಣು ಮಕ್ಕಳು ವ್ಯಾಸಂಗದಲ್ಲಿ ಏಕಾಗ್ರತೆಯನ್ನು ಬಳಸಿಕೊಳ್ಳಲು ಹಾಗೂ ಆರ್ಥಿಕ ಶಕ್ತಿಯನ್ನು ಹೊಂದಲು ಆರೋಗ್ಯಕ್ಕೆ ಆದ್ಯತೆ ನೀಡಬೇಕು ಎಂದು ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿ ಜ್ಯೋತಿಲಕ್ಷ್ಮಿ ಹೇಳಿದರು.

ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮಾಜ ಶಾಸ್ತ್ರ ವಿಭಾಗ ಹಾಗೂ ಐಕ್ಯೂಎಸಿ ಘಟಕದ ಸಂಯುಕ್ತಾಶ್ರಯದಲ್ಲಿ ನಡೆದ ಆರೋಗ್ಯದಲ್ಲಿ ಸಮತೋಲನ ಆಹಾರದ ಪಾತ್ರ ಕುರಿತು ನಡೆದ ವಿಶೇಷ ಉಪನ್ಯಾಸದಲ್ಲಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸ್ಥಳೀಯವಾಗಿ ಬೆಳೆಯುವ ರಾಗಿ, ಜೋಳ, ಸಜ್ಜೆ, ಆರಕ ಧಾನ್ಯಗಳಿಂದ ತಯಾರಿಸಿದ ಆಹಾರ, ವಿವಿಧ ಋತುಮಾನಗಳಲ್ಲಿ ದೊರೆಯುವ ಹಣ್ಣುಗಳನ್ನು ಮತ್ತು ತರಕಾರಿಗಳನ್ನು ತಿನ್ನುವ ಮೂಲಕ ತಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳಲು ಸಲಹೆ ನೀಡಿದರು.

ಪ್ರಾಂಶುಪಾಲರಾದ ಡಾ. ಕೆ.ಜಿ. ಕವಿತಾ ಮಾತನಾಡಿ, ಪೌಷ್ಟಿಕ ಆಹಾರ ಮತ್ತು ವ್ಯಾಯಾಮಗಳಿಗೆ ಹೆಚ್ಚಿನ ಆದ್ಯತೆ ಕೊಡಿ ಮತ್ತು ರಸ್ತೆ ಬದಿಯಲ್ಲಿ ಮಾರುವ ಪಾನಿಪೂರಿ ಬೇಲ್ ಪೂರಿ ಗೋಬಿ ಮಂಚೂರಿ ಹಾಗೂ ಬೇಕರಿ ತಿನಿಸುಗಳಿಂದ ದೂರವಿರಿ ಎಂಬ ಕಿವಿಮಾತು ಹೇಳಿದರು.

ಸಮಾಜಶಾಸ್ತ್ರ ವಿಭಾಗ ಮುಖ್ಯಸ್ಥ ಡಾ. ಕೆ. ಬಾಷಾ ಮಾತನಾಡಿದರು.

ಐಕ್ಯೂಎಸಿ ಘಟಕದ ಸಂಚಾಲಕ ಎಸ್. ಯೋಗೇಶ್, ಪ್ರಾಧ್ಯಾಪಕರಾದ ಡಾ. ಕೆ.ಎಸ್. ಮೋಹನ್ ಕುಮಾರ್, ಡಾ. ರಾಜಶೇಖರ್, ಡಾ. ರಾಮೇಗೌಡ, ಡಾ. ಶಂಕರಪ್ಪ, ಡಾ. ಗಿರೀಶ್, ಡಾ. ಯೋಗೀಶ್, ಡಾ. ಮಂಜುನಾಥ್ ಇತರರಿದ್ದರು.

## ಬಿಸಿಯೂಟ ಗೌರವ ಧನ ಹೆಚ್ಚಳಕ್ಕೆ ಮನವಿ





**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಸರ್ಕಾರ ಬಿಸಿಯೂಟ ನೌಕರರಿಗೆ ಗೌರವ ಧನ ಹೆಚ್ಚಳ ಹಾಗೂ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರ ಮೂಲಕ ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗೆ ಮನವಿ ಸಲ್ಲಿಸಲಾಯಿತು.

ಶಾಲಾ ಮಧ್ಯಾಹ್ನ ಊಟ ಯೋಜನೆ ಆರಂಭವಾಗಿ 24 ವರ್ಷಗಳಾಗಿವೆ. ಶಾಲಾ ದಾಖಲಾತಿ ಮತ್ತು ಮಕ್ಕಳ ಪಾಲನೆ ಖಚಿತಪಡಿಸಿಕೊಳ್ಳಲು ಮತ್ತು ದೇಶದ ಅಭಿವೃದ್ಧಿಗೆ ಹಾಗೂ ಮಕ್ಕಳ ಅಪೌಷ್ಟಿಕತೆಯನ್ನು ಪರಿಹರಿಸಲು ಈ ಯೋಜನೆ ಬಹಳಷ್ಟು ಅನುಕೂಲವಾಗಿದೆ. ದುರದೃಷ್ಟವಶಾತ್, ದೇಶಾದ್ಯಂತ ಸುಮಾರು 11.80 ಕೋಟಿ ಮಕ್ಕಳಿಗೆ ಅಡುಗೆ ಮಾಡಿ ಆಹಾರ ನೀಡುವ ಸುಮಾರು 26 ಲಕ್ಷ ಮಧ್ಯಾಹ್ನ ಊಟದ ಕೆಲಸಗಾರರನ್ನು ಕಾರ್ಮಿಕರೆಂದು ಗುರುತಿಸದೆ ಸ್ವಯಂಸೇವಕರೆಂದು ಪರಿಗಣಿಸಲಾಗುತ್ತದೆ ಎಂದು ದೂರಿದರು. ಅಡುಗೆ ಮಾಡುವುದು ಮಾತ್ರವಲ್ಲದೇ ಶಾಲೆಗಳಲ್ಲಿ ಕಸ ಗುಡಿಸುವುದು, ಅನೇಕ ಸಣ್ಣಪುಟ್ಟ ಕೆಲಸಗಳನ್ನು ಮಾಡಿಸಲಾಗುತ್ತಿದೆ. ಸರ್ಕಾರಿ ಸುತ್ತೋಲೆಯು 4 ಗಂಟೆಗಳ ಕೆಲಸವನ್ನು ನಿಗದಿಪಡಿಸಿದೆ. ಆದರೆ ಬಿಸಿಯೂಟ ನೌಕರರು ದಿನಕ್ಕೆ ಕನಿಷ್ಠ 6 ಗಂಟೆಗಳ ಕಾಲ ಕೆಲಸ ಮಾಡುತ್ತಾರೆ. 1948ರ ಕನಿಷ್ಠ ವೇತನ ಕಾಯ್ದೆ ಪ್ರಕಾರ 4 ಗಂಟೆಗಳಿಗಿಂತ ಹೆಚ್ಚು ಕೆಲಸ ಮಾಡುವವರಿಗೆ ಕನಿಷ್ಠ ವೇತನ ನೀಡಬೇಕು. ಆದರೆ ಬಿಸಿಯೂಟ ಕೆಲಸಗಾರರು ಈ ಹಕ್ಕಿನಿಂದ ವಂಚಿತರಾಗಿದ್ದಾರೆ. ಈಗ ನೀಡುತ್ತಿರುವ ವೇತನ ಇಂದಿನ ಬೆಲೆ ಏರಿಕೆಯೊಂದಿಗೆ ಜೀವನ ನಿರ್ವಹಣೆಗೆ ಕಷ್ಟವಾಗುತ್ತಿದೆ.

ಅಲ್ಲದೇ ಹಲವು ತಿಂಗಳಿಂದ ವೇತನ ಬಾಕಿ ಉಳಿಸಿಕೊಂಡಿರುವ ವೇತನವನ್ನು ಕೂಡಲೇ ಬಿಡುಗಡೆ ಮಾಡಬೇಕು ಹಾಗು ವೇತನವನ್ನು ಹೆಚ್ಚಳ ಮಾಡಬೇಕೆಂದು ಆಗ್ರಹಿಸಿದರು. ಬಿಸಿಯೂಟ ನೌಕರರಿಗೆ ಸಾಮಾಜಿಕ ಭದ್ರತೆ ಅಥವಾ ಪಿಂಚಣಿ ಇಲ್ಲ. ಆಗಾಗ್ಗೆ ಕಾರ್ಮಿಕರು ಕೆಲಸದಲ್ಲಿ ಗಾಯಗೊಂಡರೂ ಯಾವುದೇ ವೈದ್ಯಕೀಯ ಸೌಲಭ್ಯಗಳು ಸಿಗುವುದಿಲ್ಲ. ಆದ್ದರಿಂದ ಮಾತೃತ್ವ ಸೌಲಭ್ಯಗಳು ಸೇರಿ ಯಾವುದೇ ರಜೆ ನೀಡಲಾಗುತ್ತಿಲ್ಲ. ಹೀಗಾಗಿ ಅಗತ್ಯ ಸೌಲಭ್ಯ ಕಲ್ಪಿಸಿಕೊಡಲು ಕ್ರಮ ಕೈಗೊಳ್ಳಬೇಕೆಂದು ಮನವಿ ಸಲ್ಲಿಸಿದರು.

## ಉಂಡಿಗನಾಳು ಗ್ರಾಪಂಗೆ ಭೃಂಗೇಶ್ ಅಧ್ಯಕ್ಷ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಉಂಡಿಗನಾಳು ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಭೃಂಗೇಶ್ ಅವಿರೋಧ ಆಯ್ಕೆಯಾಗಿದ್ದಾರೆ.

ಜಿ.ಎಸ್. ನಿಂಗರಾಜು ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಭೃಂಗೇಶ್ ಅವಿರೋಧ ಆಯ್ಕೆಯಾಗಿದ್ದಾರೆ. ಅಧ್ಯಕ್ಷರ ಚುನಾವಣೆಗೆ ಭೃಂಗೇಶ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದು, ಬೇರೆ ಯಾರೂ ಕಣದಲ್ಲಿ ಇಲ್ಲದ ಕಾರಣಕ್ಕೆ ಚುನಾವಣಾ ಅಧಿಕಾರಿಯಾಗಿದ್ದ ತಹಶೀಲ್ದಾರ್ ಎಂ.ಜಿ. ಸಂತೋಷ್ ಕುಮಾರ್ ಅವರು ಅಧ್ಯಕ್ಷರ ಚುನಾವಣೆಯಲ್ಲಿ ಅವಿರೋಧ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು.

ಜೆಡಿಎಸ್ ಬೆಂಬಲಿತ ಸದಸ್ಯರಾದ ದೇಶಾಣಿ ಶಂಕರ್ ಮೂರ್ತಿ, ಶಶಿಧರ್, ಜಯಾಬಾಯಿ, ಶಿವಮ್ಮ, ಸಾವಿತ್ರಮ್ಮ, ಮುಖಂಡರಾದ ಈಶ್ವರಪ್ಪ, ನಂಜುಂಡಪ್ಪ, ದೇಶಾಣಿ ಶ್ರೀನಿವಾಸ್, ಪಿಡಿಓ ವಾಣಿಶ್ರೀ, ಕಾರ್ಯದರ್ಶಿ ಯೋಗೇಶ್ ಇತರರಿದ್ದರು.

## ಹಾಸನ: ಮಹಾಡ್ ಸತ್ಯಾಗ್ರಹ ದಿನಾಚರಣೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚೌಡಾರ್ ಕೆರೆಯಲ್ಲಿ 98 ವರ್ಷಗಳ ಹಿಂದೆ ನೀರು ಕುಡಿಯುವುದರ ಮೂಲಕ ದಲಿತರ ಪ್ರಥಮ ಸ್ವಾತಂತ್ರ್ಯ ಹೋರಾಟ ಎಂದು ದಲಿತ ಸಂಘರ್ಷ ಸಮಿತಿಯ ಹಿರಿಯ ಮುಖಂಡ ಕೃಷ್ಣದಾಸ್ ತಿಳಿಸಿದರು.

ನಗರದ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ ಆವರಣದಲ್ಲಿ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಮಹಾಡ್ ಸತ್ಯಾಗ್ರಹ ದಿನಾಚರಣೆಯಲ್ಲಿ ಮಾತನಾಡಿ, 1927ರ ಮಾ. 20 ರಂದು ಮಹಾರಾಷ್ಟ್ರದ ಮಹಾಡ್ ಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ನೇತೃತ್ವದಲ್ಲಿ 98 ವರ್ಷಗಳ ಹಿಂದೆ ಚೌಡಾರ್ ಕೆರೆಯಲ್ಲಿ ನೀರು ಕುಡಿಯುವುದರ ಮೂಲಕ ನಡೆಸಿದ ಹೋರಾಟ ದಲಿತರ ಪ್ರಥಮ ಸ್ವಾತಂತ್ರ್ಯ ಹೋರಾಟ ಎಂದು ತಿಳಿಸಿದರು. ಚೌಡಾರ್ ಕೆರೆಯಲ್ಲಿ ಎಲ್ಲಾ ಜಾತಿಯ ಜನರಿಗೆ ನೀರು ಬಳಸಲು ಅವಕಾಶವಿತ್ತು. ದನ, ಎಮ್ಮೆ ಜಾನುವಾರುಗಳ ಮೈಯನ್ನು ಈ ಕೆರೆಯಲ್ಲಿ ತೊಳೆಯುವುದಕ್ಕೂ ಅವಕಾಶವಿತ್ತು. ಆದರೆ ಅಸ್ಪೃಶ್ಯರಿಗೆ ಕೆರೆಯ ನೀರನ್ನು ಬಳಸಲು ನಿರ್ಬಂಧ ವಿಧಿಸಲಾಗಿತ್ತು. ಈ ವಿಷಯವನ್ನು ತಿಳಿದ ಅಂಬೇಡ್ಕರ್ ಅವರು ಮಹಾಡ್‌ನಲ್ಲಿ ಸುಮಾರು 4 ಸಾವಿರ ದಲಿತರನ್ನು ಸೇರಿಸಿ ಚೌಡಾರ್ ಕೆರೆಯಲ್ಲಿ ನೀರು ಕುಡಿಯುವುದರ ಮೂಲಕ ಸ್ವಾತಂತ್ರ್ಯ ಮತ್ತು ಸಮಾನತೆಯ ಹಕ್ಕನ್ನು ಪ್ರತಿಪಾದಿಸಿದರು. ಆದುದರಿಂದ ಈ ಸತ್ಯಾಗ್ರಹವನ್ನು ಪ್ರಪಂಚದ ಇತಿಹಾಸದಲ್ಲಿ ಇತಿಹಾಸಕಾರರು ಪ್ರಮುಖವಾಗಿ ಗುರುತಿಸುತ್ತಾರೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮನುಪ್ರಕಾಶ್ ಮಾತನಾಡಿ, ಅಂಬೇಡ್ಕರ್ ಅವರ ಬದುಕು ಮತ್ತು ಹೋರಾಟಗಳು ನಮ್ಮ ಸಮಾಜಕ್ಕೆ ಮಾದರಿಯಾಗಿವೆ ಎಂದು ತಿಳಿಸಿ, ವಿದ್ಯಾರ್ಥಿಗಳು ಅಂಬೇಡ್ಕರ್ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ವಿದ್ಯಾರ್ಥಿನಿಯರಿಗೆ ತಿಳಿಸಿದರು. ನಿಲಯ ಪಾಲಕರಾದ ಜಯಮ್ಮ ಸ್ವಾಗತಿಸಿದರು. ರಮ್ಯಾ ಸ್ವಾಗತಿಸಿದರು.

## ಗಾಂಜಾ ಸೇವನೆ: ಇಬ್ಬರ ಬಂಧನ

ಹಾಸನ: ತಾಲ್ಲೂಕಿನ ಮಳಲಿ ರಸ್ತೆ ರೈಲ್ವೆ ಸೇತುವೆ ಕೆಳಗೆ ಗಾಂಜಾ ಸೇವನೆ ಮಾಡುತ್ತಿದ್ದ ಇಬ್ಬರು ಯುವಕರನ್ನು ಪೊಲೀಸರು ಬಂಧಿಸಿ 250 ಗ್ರಾಂ ಗಾಂಜಾ ಸೊಪ್ಪು ವಶಪಡಿಸಿಕೊಂಡಿದ್ದಾರೆ. ಶಾಂತಿಗ್ರಾಮ ಹೋಬಳಿ ಹೊಳಲು ಗ್ರಾಮದ ಪ್ರಜ್ವಲ್, ಶರತ್ ಬಂಧಿತರು.


ಪಿಎಸ್ಐ ಕೃಷ್ಣ ಕುಮಾರ್ ಅವರು ರಾಷ್ಟ್ರೀಯ ಹೆದ್ದಾರಿ-75 ಬೆಂಗಳೂರು-ಮಂಗಳೂರು ರಸ್ತೆಯಲ್ಲಿ ಗಸ್ತು ತಿರುಗುತ್ತಿದ್ದ ಸಂದರ್ಭದಲ್ಲಿ ಮಳಲಿ ರಸ್ತೆ ರೈಲ್ವೆ ಬ್ರಿಡ್ಜ್ ಕೆಳಗೆ ಗಾಂಜಾ ಸೇವನೆ ಮಾಡುತ್ತಿದ್ದ ಪ್ರಜ್ವಲ್, ಶರತ್ ಎಂಬ ಇಬ್ಬರು ಆರೋಪಿಗಳನ್ನು ಬಂಧಿಸಿ, 250 ಗ್ರಾಂ ಗಾಂಜಾ ಸೊಪ್ಪನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಶಾಂತಿಗ್ರಾಮ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಾಳೆ ಮಹಿಳಾ ದಿನಾಚರಣೆ

ಹಾಸನ: ನಗರದ ಬಸವೇಶ್ವರ ಕಲ್ಯಾಣ ಮಂಟಪದ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಮಾ. 24ರ ಸೋಮವಾರ ಸಂಜೆ 5 ಗಂಟೆಗೆ ತಾಲ್ಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಿಳಾ ಘಟಕದ ನೂತನ ಮಹಿಳಾ ಘಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಮತ್ತು ಮಹಿಳಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ನಡೆಯಲಿದೆ. ವಕೀಲೆ, ಎ.ವಿ.ಕೆ. ಕಾಲೇಜು ನಿವೃತ್ತ ಪ್ರಾಂಶುಪಾಲರಾದ ಡಾ. ಅನೂಸೂಯಮ್ಮ, ಬಿ.ವಿ. ಶೋಭಾ ಮಹೇಶ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಬಿಸಿಲ ಆಟ ನಮಗೆ ಪಾಠ



**ಕೆ.ಎನ್. ಚಿದಾನಂದ ಹಾಸನ**

ಬಿಸಿಲಿನ ಧಗೆಯಲಿ ಧರೆ ಉರಿಯುತಿದೆ
ಹೊನಲಿನ ಒಡಲು ಬತ್ತಿ ಹೋಗುತಿದೆ
ಕೆರೆಕಟ್ಟೆಗಳ ತಳ ಬಿರಿಯುತಿದೆ
ನೀರಿಲ್ಲದೆ ನೀರೆಲ್ಲಿದೆ? ಮಳೆಯಿಲ್ಲದೆ

ಸೂರ್ಯನ ಕೋಪದಿ ಬಿಸಿಲಿನ ಆಟ
ಎಂದಿಗೂ ಮುಗಿಯದ ಬೇಕುಗಳೂಟ
ಕಾಡು ಕಡಿದವಗೆ ಕಾಂಕ್ರೀಟ್ ಬಡಿದವಗೆ
ನಿಸರ್ಗ ಹಾಳು ಮಾಡಿದವಗೆ ಇದೆ ಪಾಠ

ಹಸಿರಿಲ್ಲದ ಮೇಲೆ ಉಸಿರಿನ್ನೆಲ್ಲಿ
ಹಸಿರಿಲ್ಲದ ಮೇಲೆ ನೆರಳಿನ್ನೆಲ್ಲಿ
ಹಸಿರಿಲ್ಲದ ಮೇಲೆ ಧರೆಯಿನ್ನೆಲ್ಲಿ
ಹಸಿರಿಲ್ಲದೆ ನಮ್ಮೆಲ್ಲರ ಉಳಿವಿನ್ನೆಲ್ಲಿ?
ಬಿಸಿಲ ತಾಳುವ ಶಕ್ತಿ ಬಂದೀತೆ ನಮಗೆ?
ನೀರಿಲ್ಲದೆ ಜೀವಸಂಕುಲ ಅಳಿದೀತು ಕೊನೆಗೆ
ಅರಿತರೆ ಮಾತ್ರ ಉಳಿವುದೇನೋ ಭುವಿ?
ಹಸಿರಾದರೆ ಈ ಭುವಿ ಉಳಿದೀತು ಜೀವಿ
ಈ ಬಿಸಿಲ ಧರೆಯು ತಂಪಿಗಾಗಿ
ಕಾಯುತಿದೆ ತಳಮಳದಿ ಜೀವಸಂಕಲವು ಅಲೆದಾಡುತಿದೆ
ಜಾಗತಿಕ ತಾಪಮಾನ ನಿತ್ಯವೂ ಏರುತಿದೆ
ತಡೆವರುಂಟೆ? ಧರೆಗೆ ಮಳೆ ತರುವರುಂಟೆ?

# ಚಿತ್ರಕಲೆಯನ್ನೇ ಉಸಿರಾಗಿಸಿಕೊಂಡಿರುವ ಬಿ.ಎಸ್. ದೇಸಾಯಿ

**ಗೊರೂರು ಅನಂತರಾಜು, ಹಾಸನ**

ಅಮೂರ್ತತೆಯ ಬೆಳವಣಿಗೆಯ ಹಿಂದಿನ ಪ್ರೇರಣೆಗಳಲ್ಲಿ ಒಂದು ವಿಷಯಗಳ ಪ್ರಪಂಚದಿಂದ ದೂರವಿರಲು ಅನೇಕ ಕಲಾವಿದರ ಬಲವಾದ ಬಯಕೆಯಾಗಿದೆ. ಲೌಕಿಕ ಭೌತವಾದದ ಉಲ್ಲೇಖವನ್ನು ಬಹಿಷ್ಕರಿಸುವುದು ಅಮೂರ್ತ ಕಲಾವಿದರ ಕೇಂದ್ರ ಗುರಿಯಾಗಿದೆ. ಇದು ಔಪಚಾರಿಕ ಪರಿಶುದ್ಧತೆಯ ಹುಡುಕಾಟಕ್ಕೆ ಮತ್ತು ಅತಿಕ್ರಮಣಕ್ಕಾಗಿ ನಿರಂತರವಾದ ಮಾನವ ಅನ್ವೇಷಣೆಯನ್ನು ವ್ಯಕ್ತಪಡಿಸುವ ಮಾರ್ಗಗಳ ಪರಿಗಣನೆ ಎರಡಕ್ಕೂ ಕಾರಣವಾಯಿತು.

ಬಿ.ಎಸ್. ದೇಸಾಯಿಯವರ ಕಲೆಯ ಪಯಣವೂ ಅದೇ ಹಾದಿಯಲ್ಲಿದೆ. ಯೋಗ ಮತ್ತು ಧ್ಯಾನದ ಸ್ವಾಭಾವಿಕತೆಯ ವರ್ಷಾಚರಣೆಯು ಅವರ ಹೊಸ ಅನ್ವೇಷಣೆಗೆ ಸರಿಹೊಂದುವಂತೆ ಆಧ್ಯಾತ್ಮಿಕ ಭಾಷೆಯನ್ನು ಹುಡುಕುವಂತೆ ಮಾಡುತ್ತದೆ. ಸುತ್ತಮುತ್ತಲಿನ ಜೀವನದಲ್ಲಿ ಪರಮಾರ್ಥದ ಅನ್ವೇಷಣೆಯಲ್ಲಿ, ಅವರು ತನ್ನದೇ ಆದ ರೀತಿಯಲ್ಲಿ ಅದರ ಸಾರವನ್ನು ಅಮೂರ್ತಗೊಳಿಸುತ್ತಾರೆ. ಆಕಸ್ಮಿಕ ಟೆಕಶ್ಚರ್‌ಗಳಿಂದ ಸ್ಫೂರ್ತಿ ಪಡೆದ ಅವರು ಹೊಸ ದೃಶ್ಯ ಪ್ರಪಂಚವನ್ನು ರಚಿಸಲು ಕ್ಯಾನ್ವಾಸ್‌ನಲ್ಲಿ ತೇವವಾದ ಎಣ್ಣೆ ಬಣ್ಣಗಳ ಕೆಲವು ಭಾಗವನ್ನು ತೆಗೆದುಹಾಕುವ ಕೆರೆದು ಅಳಿಸುವ ವಿಧಾನವನ್ನು ರೂಪಿಸಿದರು. ಅಂತಿಮ ಫಲಿತಾಂಶವೆಂದರೆ, ಐಷಾರಾಮಿ ಬಣ್ಣದ ಆರ್ಕೆಸ್ಟ್ರೇಶನ್ ಮತ್ತು ಅದ್ದೂರಿ ಸಂಯೋಜನೆಗಳು. ಕೆಲವೊಮ್ಮೆ ಅಧೀನಗೊಂಡ ತೇಲುವ ರೂಪಗಳು ಕೆಲವು ಗುರುತಿಸಬಹುದಾದ ರೂಪಗಳ ಉಪಸ್ಥಿತಿಯನ್ನು ಸೂಚಿಸುತ್ತವೆಯಾದರೂ, ಕಲಾವಿದನ ಉದ್ದೇಶವು ಎದ್ದುಕಾಣುವ ಮಾನಸಿಕ ಭಾವನೆಗಳನ್ನು ಹೆಚ್ಚಿಸುವುದು. ಅವರ ವರ್ಣಚಿತ್ರಗಳು ಈ ಬಣ್ಣ ಮತ್ತು ವಿನ್ಯಾಸದ ಕಾರಣದಿಂದಾಗಿ ಮತ್ತು ಸರಳವಾದ ಸುಂಟರಗಾಳಿ ರೂಪಗಳ ಮೇಲೆ ಕೇಂದ್ರೀಕರಿಸುವ ಮೂಲಕ ಪ್ರೇಕ್ಷಕರನ್ನು ಹೀರಿಕೊಳ್ಳುತ್ತವೆ. ಸಂಕ್ಷಿಪ್ತವಾಗಿ ಹೇಳುವುದಾದರೆ, ಅವರ ಪ್ರತಿಯೊಂದು ಕೃತಿಯು ಭವ್ಯವಾದ ದೃಶ್ಯ ಕಾವ್ಯದ ಭಾವನೆಗಳನ್ನು ಉಂಟುಮಾಡುತ್ತದೆ.

ಬಿ.ಎಸ್. ದೇಸಾಯಿಯವರ ಕೆಲಸವನ್ನು ಅವರ ಆತ್ಮದ ಭೂದೃಶ್ಯ ಎಂದು ಕರೆಯಬಹುದು. ಆದರೆ ಇದು ಕಲಾವಿದ ಭಾವುಕ ಎಂದು ಸೂಚಿಸುವುದಿಲ್ಲ. ಅವರ ವರ್ಣಚಿತ್ರಗಳು ಭಾರತದ ಆಳವಾದ ವ್ಯಕ್ತಿತ್ವದ ಖಚಿತವಾದ ಪ್ರಭಾವವನ್ನು ಹೊಂದಿವೆ. ಅವರ ಬಣ್ಣಗಳ ವ್ಯಾಪ್ತಿಯು ಎದ್ದುಕಾಣುವ ಆದರೆ ಸಮಚಿತ್ತದಿಂದ ಅವರು ಕೆಲವು ಕಲಾವಿದರು ಸಾಧಿಸಿದ ಒಂದು ನಿರ್ದಿಷ್ಟ ಪರಿಶುದ್ಧತೆಯನ್ನು ವ್ಯಕ್ತಪಡಿಸುತ್ತಾರೆ. ಅವರ ಕುಂಚದ ಹೊಡೆತಗಳು ಅತೀಂದ್ರಿಯ ತೀವ್ರತೆಯನ್ನು ಎತ್ತಿ ತೋರಿಸುತ್ತವೆ. ಅವರ ಆಕೃತಿಗಳು ಅಮೂರ್ತವಲ್ಲ ಆದರೆ ಸಾಮರಸ್ಯ. ಇದು ಸಂಯೋಜನೆಗಳು ತಮ್ಮ ಪ್ರತ್ಯೇಕ ರಾಜ್ಯಗಳಲ್ಲಿ ನಿಗರ್ವಿಯಾಗಿ ಅಸ್ತಿತ್ವದಲ್ಲಿರಲು ಶಕ್ತಗೊಳಿಸುತ್ತದೆ. ಸಂಯೋಜನೆಗಳ ಮನೋಧರ್ಮವು ಒಟ್ಟಾರೆ ಮನಸ್ಥಿತಿಗೆ ಪೂರಕವಾಗಿದೆ. ಮಾನಸಿಕ ಅಥವಾ ಆಧ್ಯಾತ್ಮಿಕ ಅಂಶಗಳಿಂದ ಗುಣಗಳನ್ನು ಪುಷ್ಟೀಕರಿಸಲಾಗುತ್ತದೆ. ಅವರ ಕಲೆಯು ಮೂಲಭೂತವಾಗಿ ಸಂತಾನ ಮೌಲ್ಯಗಳೊಂದಿಗೆ ಬಲವಾದ ನಂಬಿಕೆಯ ಅಭಿವ್ಯಕ್ತಿಯಾಗಿದೆ.

ಪೂಜ್ಯತೆ ಮತ್ತು ನಮ್ರತೆ ಸ್ಪಷ್ಟವಾಗಿದೆ, ಜೊತೆಗೆ ಉತ್ತಮ ಸಂತಾನೋತ್ಪತ್ತಿ ಮತ್ತು ಆಂತರಿಕ ಸಂಸ್ಕೃತಿಯನ್ನು ಸೂಚಿಸುವ ಹಿಂಜರಿಕೆ. ಕಲಾವಿದನು ತಾನು ನಿಜವಾಗಿಯೂ ಚಿತ್ರಿಸಲು ಇಷ್ಟಪಡುವದನ್ನು ಚಿತ್ರಿಸುವ ಕೌಶಲ್ಯವನ್ನು ಹೊಂದಿದ್ದಾನೆ. ಗಟ್ಟಿಯಾದ ಬಣ್ಣದಲ್ಲಿ ಜೋರಾಗಿ ಕೂಗದಿರುವ ಚಾತುರ್ಯವನ್ನು ಅವನು ಹೊಂದಿದ್ದಾನೆ. ಅವರ ಕುಂಚದ ಕೆಲಸವು ಬ್ರಷ್ ಅಲ್ಲ.

ಬಿ.ಎಸ್. ದೇಸಾಯಿ ಅವರು ಆಧುನಿಕ ವರ್ಣಚಿತ್ರಕಾರರಾಗಿದ್ದು, ಅವರು ಆಳವಾದ ಭಾವನೆಗಳು ಮತ್ತು ಜೀವನದಲ್ಲಿ ತಮ್ಮದೇ ಆದ ಸತ್ಯವನ್ನು ಚಿತ್ರಿಸುತ್ತಾರೆ ಎಂಬುದು ಪದ್ಮಶ್ರೀ ಪುರಸ್ಕೃತ ಕೇಶವ್ ಮಲಿಕ್ ಅವರ ಅಭಿಪ್ರಾಯವಾಗಿದೆ.




### ಏಕವ್ಯಕ್ತಿ ಪ್ರದರ್ಶನಗಳು


ಸಬ್ಲೈಮ್ ಆರ್ಟ್ ಗ್ಯಾಲರಿ-ಬೆಂಗಳೂರು 2018 ಮತ್ತು 2019, ಯುಬಿ ನಗರ-ಬೆಂಗಳೂರು-2011, ಕರ್ನಾಟಕ ಚಿತ್ರಕಲಾ ಪರಿಷತ್ತು, ಬೆಂಗಳೂರು 2010, ಕರ್ನಾಟಕ ಚಿತ್ರಕಲಾ ಪರಿಷತ್ತು, ಬೆಂಗಳೂರು 2005, ಸಂಸ್ಕೃತಭವನ, ಹಾಸನ 2005, ಕಲಾ ಪ್ರದರ್ಶನ-ಹಾಸನ ಕಲಾ ಪ್ರದರ್ಶನ-1960, ಕಲಾ ಪ್ರದರ್ಶನ-1990 ಕಲಾಕೃತಿ ಪ್ರದರ್ಶನ-ಬೆಂಗಳೂರು 1989.

ಬಿಜಾಪುರ ಕಲಾ ಶಿಬಿರ 2024, ಅಂತರಾಷ್ಟ್ರೀಯ ಕಲಾ ಶಿಬಿರ-ಮೂಡುಬಿದರೆ 2023, ಕಾರ್ಕಳ ಕಲಾ ಶಿಬಿರ-2022, ರಾಷ್ಟ್ರೀಯ ಕಲಾವಿದರ ಶಿಬಿರ-ವಾರಣಾಸಿ-2016, ಪಿ ಆರ್ ತಿಪ್ಪೇಸ್ವಾಮಿ ಟ್ರಸ್ಟ್2014, ಕಾಗಿನೆಲೆ ಟ್ರಸ್ಟ್, ಕಾಗಿನೆಲೆ ಕಲಾ ಶಿಬಿರ, ಹಾವೇರಿ2013, ಭಾರತ ಕನ್ನಡ ಸಾಹಿತ್ಯ ಸಾಹಿತ್ಯ ಕ್ಷೇತ್ರ ಸಮ್ಮೇಳನ-ಬಿಜಾಪುರ2013, ವಿಶ್ವ ಕನ್ನಡ ಸಮ್ಮೇಳನ ಕಲಾ ಶಿಬಿರ ಬೆಳಗಾವಿ 2011, ಕರ್ನಾಟಕ ಲಲಿತಕಲಾ ಅಕಾಡೆಮಿ ಕಲಾ ಶಿಕ್ಷಕರ ಶಿಬಿರ ಹಾಸನ-2010, ಕರ್ನಾಟಕ ಲಲಿತ ಕಲಾ ಅಕಾಡೆಮಿ ಕಲಾ ಶಿಬಿರ ಕೆಮ್ಮಣ್ಣುಗುಂಡಿ 2009, ಕಲಾವಿದರು ಕಂಡ ಕರ್ನಾಟಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ದಕ್ಷಿಣ ಕಲಾವಿಭಾಗದ ಶಾಂತಿವನ 200, ಟ್ರಸ್ಟ್-ತಿರುಚಿ, ವೆಂಕಟಪ್ಪ ಗ್ಯಾಲರಿ, ಬೆಂಗಳೂರು-2007, ಮಹಾಮಸ್ತಕಾಭಿಷೇಕ ಕಲಾವಿದರ ಶಿಬಿರ-2006, ಉಪಾಸನಾ ಕಲಾವಿದರ ಶಿಬಿರ, ಸಮಸೆ-ಚಿಕ್ಕಮಗಳೂರು ಜಿಲ್ಲೆ.-2006, ರಾಷ್ಟ್ರೀಯ ಕಲಾ ಪ್ರದರ್ಶನ, ಮೌಂಟ್ ಅಬು-2004, ಅಕಾಡೆಮಿ ಸದಸ್ಯರಿಗೆ ಕಲಾ ಶಿಬಿರ, ಹೊನ್ನಾವರ-2003 ರಾಷ್ಟ್ರೀಯ ಸಂಶೋಧನಾ ಕಾರ್ಯಾಗಾರ, ಹೊನ್ನಾವರ. ದೆಹಲಿ-2000, ಹೊಯ್ಸಳ ಉತ್ಸವ ಕಲಾ ಶಿಬಿರ, ಹಳೇಬೀಡು, 1999, ಕಲಾ ಬರಹಗಾರರ ಶಿಬಿರ, ಕರ್ನಾಟಕ ಲಲಿತಕಲಾ ಅಕಾಡೆಮಿ, ಇಳಕಲ್, 1999, ಕಲಾ ಉಪನ್ಯಾಸಕರ ಚಿತ್ರಕಲಾ ಪ್ರದರ್ಶನ, ಬಿಜಾಪುರ, 1999, ಕರ್ನಾಟಕ ಲಲಿತಕಲಾ ಅಕಾಡೆಮಿಯಿಂದ ಕಲಾವಿದರ ಶಿಬಿರದಲ್ಲಿ ಭಾಗವಹಿಸಿದ್ದಾರೆ.

### ದೇಸಾಯಿ ಅವರ ಪರಿಚಯ

ಜನನ: ಅಕ್ಟೋಬರ್ 2, 1965, ವಿದ್ಯಾರ್ಹತೆ: ಪ್ರಿ-ಯೂನಿವರ್ಸಿಟಿ ಕೋರ್ಸ್ (ವಾಣಿಜ್ಯ ಕಲೆ), ಡ್ರಾಯಿಂಗ್ ಮತ್ತು ಪೇಂಟಿಂಗ್‌ನಲ್ಲಿ ಡಿಪ್ಲೊಮಾ, ಡಿಪ್ಲೊಮಾ ಇನ್ ಆರ್ಟ್ ಮಾಸ್ಟರ್ ಆಫ್ ವಿಷುಯಲ್ ಆರ್ಟ್.

(1988 ರಿಂದ 91) ಆದರ್ಶ ಫೈನ್ ಆರ್ಟ್ ಕಾಲೇಜ್ ಇಂಡಿ, ಬಿಜಾಪುರ ಜಿಲ್ಲೆ, ಕರ್ನಾಟಕ, ಭಾರತ, (1991 ರಿಂದ 2018) ಆರ್ಟ್ ಮಾಸ್ಟರ್ ಉಪನ್ಯಾಸಕರು. ಬಾಲಕರ ಪದವಿ ಪೂರ್ವ ಕಾಲೇಜು, ಹಾಸನ, (2019 ರಿಂದ 2023) ಸರ್ಕಾರಿ ಶಾಲೆ, ಕಲ್ಲಾರೆ, ಆಲೂರು ತಾಲ್ಲೂಕು 2023 ರಿಂದ ಇಲ್ಲಿಯವರೆಗೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

### ಮುಂಬೈನಲ್ಲಿ ಪ್ರದರ್ಶನ

ಬಿ.ಎಸ್. ದೇಸಾಯಿ ಹಾಗೂ ನಾಲ್ವರು ಸ್ನೇಹಿತರು ಒಟ್ಟಾಗಿ ಮಾ. 18 ರಿಂದ ಮೇ 24ರ ವರೆಗೆ ಮುಂಬೈನ ಜಹಾಂಗೀರ್ ಆರ್ಟ್ ಗ್ಯಾಲರಿಯಲ್ಲಿ ಚಿತ್ರಕಲಾ ಪ್ರದರ್ಶನ ಹಮ್ಮಿಕೊಂಡಿದ್ದಾರೆ. ದೇಶ ವಿದೇಶದ ಚಿತ್ರರಸಿಕರು ಅಲ್ಲಿಗೆ ಭೇಟಿ ನೀಡುತ್ತಿದ್ದು ಬಿ.ಎಸ್. ದೇಸಾಯಿ ಅವರ ಪರಿಸರ ಪ್ರಿಯ ಚಿತ್ರಕಲೆಗಳಿಗೆ ಭಾರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248